# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2021-22 ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ವಕ್ಫ್ ಯಾತ್ರಸ್ಥಳಗಳಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ : 1) ಸರ್ಕಾರಿ ಆದೇಶ ಸಂಖ್ಯೆ: MWD 159 MDS 2021, ದಿನಾಂಕ:27.04.2021, 01.07.2021 ಮತ್ತು 22.10.2021

2) ಮುಖ್ಯ ಕಾರ್ಯನಿರ್ವಾಹಣಾದಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಬೆಂಗಳೂರು, ಇವರ ಪ್ರಸ್ತಾವನೆ.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ದಿನಾಂಕ:27-04-2021, 01-07-2021 ಮತ್ತು 22-10-2021 ರ ಸರ್ಕಾರಿ ಆದೇಶಗಳಲ್ಲಿ ವಕ್ಫ್ ಯಾತ್ರಸ್ಥಳಗಳಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ 2021-22ನೇ ಸಾಲಿಗೆ ಲೆಕ್ಕ ಶೀರ್ಷಿಕೆ 2225-04-800-0-03(059) (ಯೋಜನೆ) ರಡಿಯಲ್ಲಿ ಸರ್ಕಾರವು ರೂ.200.00ಲಕ್ಷಗಳ ಅನುದಾನವನ್ನು ನಿಗಧಿಪಡಿಸಿದ್ದು ಮೊದಲನೇ, ಎರಡನೇ ಹಾಗೂ ಮೂರನೇ ಕಂತಿನ ಅನುದಾನ ರೂ.150.00ಲಕ್ಷ ಮಂಜೂರು ಮಾಡಲಾಗಿದೆ.

ಮೇಲೆ (3)ರಲ್ಲಿ ಓದಲಾದ ಮುಖ್ಯ ಕಾರ್ಯನಿರ್ವಾಹಣಾದಿಕಾರಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಿಂದ ಪ್ರಸ್ತಾವನೆಗಳನ್ನು ಪಡೆಯಲಾಗಿದ್ದು, ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: MWD 02 WGA 2021(2),ಬೆಂಗಳೂರು,ದಿನಾಂಕ: 08-11-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ 2021-22 ಸಾಲಿನ ಅನುದಾನದಲ್ಲಿ ರಾಜ್ಯದ 08 ಜಿಲ್ಲೆಗಳ 11 ವಕ್ಫ್ ಸಂಸ್ಥೆಗಳಿಗೆ ಒಟ್ಟು ರೂ.160.50 ಲಕ್ಷಗಳು (ಒಂದು ಕೋಟಿ ಅರವತ್ತು ಲಕ್ಷ ಐವತ್ತು ಸಾವಿರ ರೂಪಾಯಿಗಳು ಮಾತ್ರ) ಅನುದಾನವನ್ನು ಮಂಜೂರು ಮಾಡಿದ್ದು ಅನುಬಂಧದಲ್ಲಿ ಆ ಸಂಸ್ಥೆಗಳ ಎದುರಿಗೆ ಸೂಚಿಸಲಾಗಿರುವ ಪ್ರತ್ಯೇಕ ಮೊತ್ತವನ್ನು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಬಿಡುಗಡೆ ಮಾಡಲು ಆದೇಶಿಸಿದೆ.

## ಷರತ್ತುಗಳು:

1. 2021-22ನೇ ಸಾಲಿನ ಲೆಕ್ಕ ಶೀರ್ಷಿಕೆ "2225-04-800-0-03(059)" ರಡಿಯಲ್ಲಿ ಅಲ್ಪಸಂಖ್ಯಾತರ ಯಾತ್ರ ಸ್ಥಳಗಳಲ್ಲಿ ಮೂಲಸೌಲಭ್ಯ ಅಭಿವೃದ್ಧಿ ಮಂಜೂರು ಮಾಡಿರುವ ಅನುದಾನವನ್ನು ಮೂಲಸೌಲಭ್ಯ ಅಭಿವೃದ್ಧಿ(ಯೋಜನೆ) ಸಹಾಯಾನುದಾನ ಅಡಿಯಲ್ಲಿ ಬಿಡುಗಡೆಯಾಗಿರುವ ಅನುದಾನದಲ್ಲಿ ಭರಿಸತಕ್ಕದ್ದು.

........2

D:\Mansoora\

2. ರೂ.5.00ಲಕ್ಷಕ್ಕಿಂತ ಹೆಚ್ಚು ಅನುದಾನ ಮಂಜೂರು ಮಾಡಲಾಗಿರುವ ವಕ್ಫ್ ಸಂಸ್ಥೆಗಳಿಗೆ ಮೊದಲನೇ ಕಂತಿನ ರೂ.5.00 ಲಕ್ಷಗಳನ್ನು ಪ್ರಥಮ ಕಂತಿನಲ್ಲಿ ಬಿಡುಗಡೆ ಮಾಡಿ ಇನ್ನುಳಿದ ಮೊತ್ತವನ್ನು ಎರಡನೇ ಕಂತಿನಲ್ಲಿ ಬಿಡುಗಡೆ ಮಾಡತಕ್ಕದ್ದು. 2ನೇ ಕಂತಿನ ಅನುದಾನ ಬಿಡುಗಡೆ ಮಾಡುವ ಮೊದಲು ಕಾಮಗಾರಿಯ ಪ್ರಗತಿಯನ್ನು ಕಡ್ಡಾಯವಾಗಿ ಪರಿಶೀಲಿಸಿ ಪ್ರಗತಿಯಾದಲ್ಲಿ ಮಾತ್ರ ಅನುದಾನ ಬಿಡುಗಡೆ ಮಾಡತಕ್ಕದ್ದು.

3. ರೂ.5.00ಲಕ್ಷಕ್ಕಿಂತ ಕಡಿಮೆ ಅನುದಾನ ಮಂಜೂರಾಗಿರುವ ವಕ್ಫ್ ಸಂಸ್ಥೆಗಳಿಗೆ ಅನುದಾನವನ್ನು ಒಂದೇ ಕಂತಿನಲ್ಲಿ ಬಿಡುಗಡೆ ಮಾಡತಕ್ಕದ್ದು.

4. ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಮತ್ತು ಜಿಲ್ಲಾ ವಕ್ಫ್ ಸಲಹಾ ಸಮಿತಿಯವರು ಆದೇಶ ಹೊರಡಿಸಿದ 2 ತಿಂಗಳ ಒಳಗಾಗಿ ಸದರಿ ಎಲ್ಲಾ ಸಂಸ್ಥೆಗಳಿಗೆ ಹಣ ಬಿಡುಗಡೆ ಮಾಡುವುದು ಸದರಿ ಅನುದಾನವನ್ನು ಯಾವ ಉದ್ದೇಶಕ್ಕಾಗಿ ಹಣ ಬಿಡುಗಡೆಗೊಳಿಸಲಾಗಿದೆಯೋ ಆ ಉದ್ದೇಶಕ್ಕಾಗಿ ಬಳಕೆಯಾಗಿರುವ ಬಗ್ಗೆ ಬಳಕೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಸಂಸ್ಥೆಗಳು ಕಡ್ಡಾಯವಾಗಿ ಕಳುಹಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2021, ದಿನಾಂಕ:05.04.2021 ಹಾಗೂ 30.09.2021 ರನ್ವಯ ಸರ್ಕಾರದ ಕಾರ್ಯದರ್ಶಿಯವರಿಗೆ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮಹಿಬೂಬ ಸಾಬ)
ಸರ್ಕಾರದ ಉಪ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು
ವಕ್ಫ್ ಇಲಾಖೆ.

ಗೆ:

1) ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು
2) ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು
3) ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ) ವಿಧಾನ ಸೌಧ, ಬೆಂಗಳೂರು.
4) ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಬೆಂಗಳೂರು.
5) ಸರ್ಕಾರದ ಉಪ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ಇವರ ಆಪ್ತ ಸಹಾಯಕರು, ಬೆಂಗಳೂರು.

.......3

6) ಮಾನ್ಯ ಹಜ್ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು

7) ಸಮನ್ವಯ ಅಧಿಕಾರಿ, ಅಲ್ಪಸಂಖ್ಯಾತರ ಸಹಾಯವಾಣಿ ಕೇಂದ್ರ 24*7, ವಸಂತನಗರ, ಬೆಂಗಳೂರು.

8) ಅಧ್ಯಕ್ಷರು/ವಕ್ಫ್ ಅಧಿಕಾರಿಗಳು, ಜಿಲ್ಲಾ ವಕ್ಫ್ ಸಲಹಾ ಸಮಿತಿ, ಉಡುಪಿ, ದಕ್ಷಿಣ ಕನ್ನಡ, ಚಾಮರಾಜನಗರ, ಕೊಡಗು, ಕಲಬುರಗಿ ಹಾಸನ, ರಾಯಚೂರು ಮತ್ತು ಬೆಳಗಾವಿ ಜಿಲ್ಲೆಗಳು.

9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

~~~~~*****~~~~~~
~~~~~